ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ; ನ್ಯಾಯಾಲಯ, ಶ್ರೀರಂಗಪಟ್ಟಣ.

ಸಾಕ್ಷಿಗೆ ಪ್ರಮಾಣ ವಚನ ಮಾಡಲಾದ ದಿ : 16.09.2023
ಪಾಟಿ ಸವಾಲು : ಪ್ರತಿವಾದಿ ಪರ ಶ್ರೀಮತಿ ಎಲ್.ವಿ. ವಕೀಲರಿಂದ

ದಾವಾ ಸ್ವತ್ತಿನ ಸ.ನಂಬರ್ ಮತ್ತು ಅದರ ವಿಸ್ತೀರ್ಣ ನನಗೆ ಗೊತ್ತಿಲ್ಲ. ದಾವಾ ಸ್ವತ್ತಿನ ಚೆಕ್ಕುಬಂದಿ ಹೇಳಲಾಗುವುದಿಲ್ಲ. ದಾವಾ ಸ್ವತ್ತಿನ ಪೂರ್ವ ದಿಕ್ಕಿನಲ್ಲಿ ನನಗೆ ಸೇರಿದ 30 ಗುಂಟೆ ಜಮೀನು ಇರುತ್ತದೆ. ನನಗೆ ಸೇರಿದ ಜಮೀನಿನ ಸ.ನಂ. ನನಗೆ ಗೊತ್ತಿಲ್ಲ. ವಾದಿಗಳಿಗೆ ದಾವಾ ಸ್ವತ್ತು ಹೇಗೆ ಬಂತು ಎಂದು ನನಗೆ ಗೊತ್ತಿಲ್ಲ. ವಾದಿಗಳಿಗೆ ಯಾವ ಯಾವ ಸ.ನಂಬರ್ ನಲ್ಲಿ ಎಷ್ಟು ವಿಸ್ತೀರ್ಣದ ಜಮೀನುಗಳು ಇರುತ್ತವೆ ಎಂದು ನನಗೆ ಗೊತ್ತಿಲ್ಲ. ದಾವಾಸ್ವತ್ತಿನಲ್ಲಿ ಸರ್ವೆಯರ್ ರವರು ಬಂದು ಅಳತೆ ಮಾಡಿದ ವಿಚಾರ ಗೊತ್ತು. ಆ ಸಮಯದಲ್ಲಿ 1 ನೇ ವಾದಿ ಸಹ ಸ್ಥಳದಲ್ಲಿ ಹಾಜರಿದ್ದರು ಎಂದರೆ ಸರಿ.

ಚಿಕ್ಕ ಮಾದಪ್ಪನವರ ಮಗ ಮುದ್ದು ಮಾದಪ್ಪ ನವರ ಹೆಸರಿಗೆ ಸ.ನಂ.94 ರಲ್ಲಿ 1 ಹೆಕ್ಟರ್ 59 ಏರ್ಸ ಜಮೀನು ಇದ್ದ ಬಗ್ಗೆ ನನಗೆ ಗೊತ್ತಿಲ್ಲ. ಸ.ನಂ.94 ರಲ್ಲಿ 1 ಎಕರೆ 20 ಗುಂಟೆ ಜಮೀನನ್ನು ವಾದಿಯ ಕುಟುಂಬದವರು ಪ್ರತಿವಾದಿಗೆ ಭೋಗ್ಯ ಮಾಡಿ ನಂತರ ಸದರಿ ಸ್ವತ್ತನ್ನು ಅವರಿಗೆ ಮಾರಾಟ ಮಾಡಿರುವ ಬಗ್ಗೆ ನನಗೆ ಗೊತ್ತಿಲ್ಲ. ಪ್ರತಿವಾದಿ ಸ.ನಂ.94 ರಲ್ಲಿ 1 ಎಕರೆ 20 ಗುಂಟೆ ಜಮೀನಲ್ಲಿ ಸ್ವಾಧೀನದಲ್ಲಿದ್ದಾರೆ ಎಂದರೆ ಸರಿ.

ಮರು ವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಓ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.